# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 69

ಸದಸ್ಯರ ಹೆಸರು : ಶ್ರೀ ಎಂ.ನಾಗರಾಜು
(ವಿಧಾನ ಸಭೆಯಿಂದ ಚುನಾಯಿತರಾದವರು)

ಉತ್ತರಿಸುವ ದಿನಾಂಕ : 04-12-2023

ಉತ್ತರಿಸುವವರು : ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಆನೆ ಮತ್ತು ಚಿರತೆ ಮುಂತಾದ ಕಾಡು ಪ್ರಾಣಿಗಳಿಂದ ರೈತರ ಜಮೀನಿನ ಮೇಲೆ ಮತ್ತು ಸಾರ್ವಜನಿಕರ ಮೇಲೆ ದಾಳಿ ನಡೆಯುತ್ತಿದ್ದು ಇದರಿಂದಾಗಿರುವ ಬೆಳೆ ನಾಶವೆಷ್ಟು ಮತ್ತು ಕಾಡು ಪ್ರಾಣಿಗಳಿಂದ ದಾಳಿಗೊಳಗಾಗಿ ಮೃತಪಟ್ಟವರ ಸಂಖ್ಯೆ ಎಷ್ಟು | ರಾಜ್ಯದಲ್ಲಿ ಆನೆ, ಚಿರತೆ ಹಾಗೂ ಇನ್ನಿತರೆ ಪ್ರಾಣಿಗಳ ಹಾವಳಿಯಿಂದ ಉಂಟಾದ ಮಾನವ ಪ್ರಾಣ ಹಾನಿ ಹಾಗೂ ಬೆಳೆನಾಶ ಪ್ರಕರಣ ಹಾಗೂ ಪಾವತಿಸಿದ ಪರಿಹಾರ ಧನದ ವಿವರ ಈ ಕೆಳಕಂಡಂತಿದೆ:- (ರೂ.ಲಕ್ಷಗಳಲ್ಲಿ) (ಕೆಳಗಿನ ಕೋಷ್ಟಕ) |
| (ಆ) | ಬೆಳೆ ಹಾನಿಗೊಳಗಾದ ರೈತರಿಗೆ ಪರಿಹಾರವನ್ನು ನೀಡಲಾಗಿದೆಯೇ; ಕಾಡು ಮೃಗಗಳಿಂದ ದಾಳಿಗೊಳಗಾಗಿ ಮೃತಪಟ್ಟ ಕುಟುಂಬಗಳಿಗೆ ಪರಿಹಾರವನ್ನು ವಿತರಿಸಲಾಗಿದೆಯೇ; (ಮಾಹಿತಿ ನೀಡುವುದು) | |

(ರೂ.ಲಕ್ಷಗಳಲ್ಲಿ)

| ವರ್ಷ | ಮಾನವ ಪ್ರಾಣ ಹಾನಿ | | ಬೆಳೆಹಾನಿ | |
|---|---|---|---|---|
| | ಪ್ರಕರಣ | ಮೊತ್ತ | ಪ್ರಕರಣ | ಮೊತ್ತ |
| 2020-21 | 45 | 334.38 | 24,740 | 1422.93 |
| 2021-22 | 41 | 330.00 | 31,255 | 1843.10 |
| 2022-23 | 53 | 462.50 | 33,234 | 2240.95 |
| 2023-24 (ಅಕ್ಟೋಬರ್-2023ರವರೆಗೆ) | 36 | 376.00 | 12,782 | 1089.43 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಇ) | ವನ್ಯಜೀವಿಗಳು ನಾಡಿಗೆ ಬರದಂತೆ ತಡೆಯಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು? | ರಾಜ್ಯದಲ್ಲಿ ಕಾಡಾನೆ ಒಳಗೊಂಡಂತೆ ಇತರೆ ವನ್ಯಪ್ರಾಣಿಗಳು ನಾಡಿಗೆ ಬರದಂತೆ ತಡೆಗಟ್ಟಲು ಇಲಾಖಾ ವತಿಯಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br><br>1. ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022, ದಿನಾಂಕ: 21.11.2022 ರಲ್ಲಿ ಕಾಡಾನೆ ಹಾವಳಿ ಹೆಚ್ಚಾಗಿರುವ ಹಾಸನ ಚಿಕ್ಕಮಗಳೂರು, ಮೈಸೂರು ಮತ್ತು ಕೊಡಗು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿ ತಡೆಗಟ್ಟಲು ಪ್ರತಿ ಜಿಲ್ಲೆಗೊಂದರಂತೆ ಅಧಿಕಾರಿ / ಸಿಬ್ಬಂದಿಗಳನ್ನೊಳಗೊಂಡ ಆನೆ ಕಾರ್ಯಪಡೆ (Elephant Task Force) ಯನ್ನು ಹಾಸನ ಜಿಲ್ಲೆಯ ಸಕಲೇಶಪುರ ಕೇಂದ್ರ ಸ್ಥಾನದಲ್ಲಿ, ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ಕೇಂದ್ರ ಸ್ಥಾನದಲ್ಲಿ, ಮೈಸೂರು ಜಿಲ್ಲೆಯ ಹುಣಸೂರು ಕೇಂದ್ರ ಸ್ಥಾನದಲ್ಲಿ ಮತ್ತು ಕೊಡಗು ಜಿಲ್ಲೆಯ ಮಡಿಕೇರಿ ಕೇಂದ್ರ ಸ್ಥಾನದಲ್ಲಿ ರಚಿಸಲಾಗಿರುತ್ತದೆ.<br><br>ಸರ್ಕಾರದ ಆದೇಶ ಸಂಖ್ಯೆ: ಎಫ್‌ಇಇ 311 ಎಫ್‌ಇಜಿ 2022 (ಇ), ದಿನಾಂಕ:01.02.2023 ರನ್ವಯ ಚಾಮರಾಜನಗರ ಜಿಲ್ಲೆಯಲ್ಲಿ ಕಾಡಾನೆ ಹಾವಳಿ ತಡೆಯಲು ಚಾಮರಾಜನಗರ ಕೇಂದ್ರ ಸ್ಥಾನದಲ್ಲಿ ಆನೆ ಕಾರ್ಯಪಡೆಯನ್ನು ರಚಿಸಲಾಗಿದೆ. |

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಅಪಜೀ 170 ಎಫ್‌ಡಬ್ಲ್ಯೂಎಲ್ 2022, ದಿನಾಂಕ: 30.06.2023 ರಲ್ಲಿ ರಾಮನಗರ ಮತ್ತು ಬೆಂಗಳೂರು ಜಿಲ್ಲೆಗಳಲ್ಲಿ ಕಾಡಾನೆ ಹಾವಳಿಯನ್ನು ತಡೆಯಲು ರಾಮನಗರ ಹಾಗೂ ಬನ್ನೇರುಘಟ್ಟ ರಾಷ್ಟ್ರೀಯ ಉದ್ಯಾನವನ ಕೇಂದ್ರ ಸ್ಥಾನವಾಗಿ ಆನೆ ಕಾರ್ಯಪಡೆಯನ್ನು ರಚಿಸಲಾಗಿದೆ. ಅದರನ್ವಯ ಆನೆ ಕಾರ್ಯಪಡೆ ರಚನೆಯಾಗಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿವೆ.

2. ವನ್ಯಪ್ರಾಣಿಗಳಿಗಾಗಿ ಅರಣ್ಯ ಪ್ರದೇಶಗಳ ಒಳಗೆ ನೀರಿನ ಲಭ್ಯತೆ ಹೆಚ್ಚಿಸಲು ರಕ್ಷಿತಾರಣ್ಯಗಳಲ್ಲಿ ಕೆರೆಗಳ ನಿರ್ಮಾಣ ಹಾಗೂ ಪುನಶ್ಚೇತನಗೊಳಿಸಿ ವನ್ಯಪ್ರಾಣಿಗಳ ಆವಾಸ ಸ್ಥಾನವನ್ನು ಅಭಿವೃದ್ಧಿಗೊಳಿಸಲಾಗುತ್ತಿದೆ. ಇದರಿಂದ ಕಾಡಾನೆ ಹಾಗೂ ಇತರೆ ವನ್ಯಪ್ರಾಣಿಗಳು ಕಾಡಿನಿಂದ ಹೊರಗೆ ಬಾರದಂತೆ ತಡೆಯಲಾಗುತ್ತಿದೆ.

3. ಅರಣ್ಯ ಪ್ರದೇಶಗಳಲ್ಲಿ ಹುಲ್ಲುಗಾವಲು ಸಂರಕ್ಷಣೆ ಹಾಗೂ ಅಭಿವೃದ್ಧಿಗೊಳಿಸಲು ಹೆಚ್ಚಿನ ಅರಣ್ಯ ಪ್ರದೇಶಗಳಲ್ಲಿ ದಟ್ಟವಾಗಿ ಬೆಳೆದ ಲಂಟಾನ ಮತ್ತು ಯುಪಟೋರಿಯಂ ಕಳೆಗಳಿಂದಾಗಿ ಹುಲ್ಲಿನ ಬೆಳವಣಿಗೆಗೆ ತೀವ್ರ ಅಡಚಣೆಯಾಗಿ ಅರಣ್ಯದಲ್ಲಿ ಹುಲ್ಲಿನ ಲಭ್ಯತೆ ಗಣನೀಯವಾಗಿ ಕಡಿಮೆಯಾಗಿರುವುದರಿಂದ ಹುಲ್ಲು ಬೆಳೆಯುವ ಪ್ರದೇಶಗಳಲ್ಲಿ ಬೆಳೆದಿರುವ ಲಂಟಾನ ಮತ್ತು ಯುಪಟೋರಿಯಂ ಕಳೆಗಳನ್ನು ಕಿತ್ತು ಸ್ವಚ್ಛಗೊಳಿಸಿ ಅರಣ್ಯಕ್ಕೆ ಪೂರಕವಾದ ಹುಲ್ಲು ಬೆಳೆಯಲು ಅನುವು ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

4. ಕಾಡಾನೆಗಳು ಅರಣ್ಯ ಪ್ರದೇಶದಿಂದ ಹೊರಗೆ ಬಾರದಂತೆ ತಡೆಗಟ್ಟಲು ಅರಣ್ಯದಂಚಿನಲ್ಲಿ ಸೌರಶಕ್ತಿ ಬೇಲಿ ನಿರ್ಮಾಣ/ನಿರ್ವಹಣೆ, ಆನೆತಡೆ ಕಂದಕ ನಿರ್ಮಾಣ/ನಿರ್ವಹಣೆ ಮಾಡಲಾಗಿದ್ದು ಮತ್ತು ರೈಲ್ವೆ ಹಳಿಗಳನ್ನು ಉಪಯೋಗಿಸಿ ಬ್ಯಾರಿಕೇಡ್ ನಿರ್ಮಿಸುವ ಕಾಮಗಾರಿಯನ್ನು ಕೈಗೊಳ್ಳಲಾಗಿದೆ.

5. ಕಾಡಾನೆ ಹಾವಳಿ ತುರ್ತು ನಿರ್ವಹಣೆಗಾಗಿ ಕ್ಷಿಪ್ರ ಕಾರ್ಯಪಡೆ ತಂಡಗಳನ್ನು (RRT) ರಚಿಸಿ ನಿರ್ವಹಿಸಲಾಗುತ್ತಿದೆ.

6. ಕಾಡಾನೆ ಹಿಮ್ಮೆಟ್ಟಿಸುವ ತಂಡಗಳನ್ನು ರಚಿಸಿ ಕಾಡಾನೆಗಳನ್ನು ಕಾಡಿಗೆ ಹಿಮ್ಮೆಟ್ಟಿಸುವ ಕಾರ್ಯ ಕೈಗೊಳ್ಳಲಾಗುತ್ತಿದೆ.

7. ನಿಸ್ತಂತು ಜಾಲದ ಮೂಲಕ ಮಾಹಿತಿ ಸಂವಹನ ಮಾಡಲಾಗುತ್ತಿದೆ.

8. ಕಾಡಾನೆಗಳ ಮಾಹಿತಿಯನ್ನು ಸಂಗ್ರಹಿಸಲು 24 ಗಂಟೆ ಕಾರ್ಯನಿರ್ವಹಿಸುವ ಮಾಹಿತಿ ಕೇಂದ್ರ ಸ್ಥಾಪಿಸಲಾಗಿದೆ.

| | | |
|---|---|---|
| | | 9. ಕಾಡಾನೆ ಗುಂಪಿನಲ್ಲಿದ್ದ ವಯಸ್ಕ ಹೆಣ್ಣಾನೆಯನ್ನು ಗುರುತಿಸಿ ಅದಕ್ಕೆ ರೇಡಿಯೋ ಕಾಲರ್ ಅಳವಡಿಸಿ ಆನೆಗಳ ಚಲನ-ವಲನಗಳ ಬಗ್ಗೆ ಎಸ್.ಎಂ.ಎಸ್. ಹಾಗೂ ವಾಟ್ಸಾಪ್ ಮೂಲಕ ಜನರಿಗೆ ಮಾಹಿತಿಯನ್ನು ನೀಡಿ ಮಾನವ ಪ್ರಾಣಹಾನಿ ಹಾಗೂ ಮಾನವ ಗಾಯ ತಪ್ಪಿಸಲು ಕ್ರಮ ವಹಿಸಲಾಗುತ್ತಿದೆ.<br><br>10. ಸಾರ್ವಜನಿಕರಿಗೆ ಉಪಟಳ ನೀಡುತ್ತಿರುವ ಪುಂಡಾನೆಗಳನ್ನು ಗುರುತಿಸಿ, ಸೆರೆಹಿಡಿದು ಆಗ್ಗಿಂದಾಗ್ಗೆ ಆನೆ ಶಿಬಿರಕ್ಕೆ ಅಥವಾ ರೇಡಿಯೋ ಕಾಲರ್ ಅಳವಡಿಸಿ ಸೂಕ್ತ ಅರಣ್ಯ ಪ್ರದೇಶಕ್ಕೆ ಸ್ಥಳಾಂತರಿಸಲಾಗುತ್ತಿದೆ.<br><br>ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾದ ಹಾನಿ ಪ್ರಕರಣಗಳಲ್ಲಿ ದಯಾತ್ಮಕ ಧನವನ್ನು ನಿಯಮಾನುಸಾರ ಪಾವತಿಸಲಾಗುತ್ತಿದ್ದು, ಇತ್ತೀಚಿನ ದಿನಗಳಲ್ಲಿ ವನ್ಯಪ್ರಾಣಿಗಳ ಹಾವಳಿಯಿಂದ ಉಂಟಾಗುವ ಹಾನಿ ಪ್ರಕರಣಗಳಿಗೆ ಇ-ತತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಲಾಗುತ್ತಿದ್ದು, ಆಧ್ಯತೆ ಮೇರೆಗೆ ಸರ್ಕಾರದ ನಿಯಮಾನುಸಾರ ಪರಿಶೀಲಿಸಿ, ಶೀಘ್ರವೇ ನೇರವಾಗಿ ಸಂತ್ರಸ್ಥರ ಖಾತೆಗೆ ಪಾವತಿಸುವ ಪ್ರಕ್ರಿಯೆಯನ್ನು ಇ-ಪರಿಹಾರ ತಂತ್ರಾಂಶದ ಮೂಲಕ ನಿರ್ವಹಿಸಲಾಗುತ್ತಿದೆ. |

**ಸಂಖ್ಯೆ: ಅಪಜೀ 116 ಎಫ್‌ಡಬ್ಲ್ಯೂಎಲ್ 2023**

**(ಈಶ್ವರ ಬಿ. ಖಂಡ್ರೆ)**
ಅರಣ್ಯ, ಜೀವಿಶಾಸ್ತ್ರ, ಮತ್ತು ಪರಿಸರ ಸಚಿವರು